ಕರ್ನಾಟಕ ಸರ್ಕಾರ

ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಪಪೂಶಿಇ:ರಾಸೇಯೋ:10/2018-19

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18 ನೇ ಕ್ರಾಸ್, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 30/04/2018.

ಜ್ಞಾಪನ

ವಿಷಯ:- ಪದವಿ ಪೂರ್ವ ಕಾಲೇಜುಗಳಲ್ಲಿ 2018-19ನೇ ಸಾಲಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಹೊಸ ಘಟಕಗಳನ್ನು ಪ್ರಾರಂಭಿಸಲು ಪ್ರಸ್ತಾವನೆಗಳನ್ನು ಆಹ್ವಾನಿಸುತ್ತಿರುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2018-19ನೇ ಸಾಲಿನಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಘಟಕಗಳನ್ನು ಹೊಸದಾಗಿ ಪ್ರಾರಂಭಿಸಲು ಪ್ರಸ್ತಾವನೆಗಳನ್ನು ಕಾಲೇಜುಗಳಿಂದ ಆಹ್ವಾನಿಸಲಾಗಿದೆ. ಆಸಕ್ತ ಕಾಲೇಜುಗಳ ಪ್ರಾಂಶುಪಾಲರುಗಳು ಈ ಕೆಳಕಂಡ ನಿಗದಿತ ನಮೂನೆಯಲ್ಲಿ ಜೂನ್ 20, 2018ರ ಒಳಗಾಗಿ ಪ್ರಸ್ತಾವನೆಗಳನ್ನು ರಾಜ್ಯಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ ಎನ್.ಎಸ್.ಎಸ್ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು ಇಲ್ಲಿಗೆ ಮುದ್ದಾಂ ಆಗಿ ಅಥವಾ ನೊಂದಾಯಿತ ಅಂಚೆ ಮೂಲಕ ಕಳುಹಿಸಲು ಕೋರಿದೆ. ಇಲಾಖೆಯಿಂದ "ಎನ್.ಎಸ್.ಎಸ್ ಘಟಕ ಮಂಜೂರಾತಿ ಪತ್ರ" ದೊರೆತ ನಂತರ ಮಾತ್ರ ಕಾಲೇಜುಗಳಲ್ಲಿ ಎನ್.ಎಸ್.ಎಸ್ ನ ಹೊಸ ಘಟಕ ಪ್ರಾರಂಭಿಸುವುದು. "ಎನ್.ಎಸ್.ಎಸ್ ಘಟಕ ಮಂಜೂರಾತಿ ಪತ್ರ" ದೊರೆಯದ ಹೊರತು ಕಾಲೇಜುಗಳಲ್ಲಿ ಎನ್.ಎಸ್.ಎಸ್. ಘಟಕ ಕೈಗೊಳ್ಳುವ ಯಾವುದೇ ಚಟುವಟಿಕೆಗಳಿಗೆ ಇಲಾಖೆಯಿಂದ ಅನುದಾನವನ್ನು ಬಿಡುಗಡೆ ಮಾಡಲಾಗುವುದಿಲ್ಲ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

ಎನ್.ಎಸ್.ಎಸ್. ಸಂಯೋಜನಾಧಿಕಾರಿಗಳು
ಪದವಿ ಪೂರ್ವ ಶಿಕ್ಷಣ ಇಲಾಖೆ,
ಬೆಂಗಳೂರು.

ಪ್ರತಿಗಳು:

1. ರಾಷ್ಟ್ರೀಯ ಸೇವಾ ಯೋಜನೆ ಪ್ರಾಂತೀಯ ನಿರ್ದೇಶಕರು ಬೆಂಗಳೂರು.
2. ರಾಜ್ಯ ಎನ್.ಎಸ್.ಎಸ್.ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಎನ್.ಎಸ್.ಎಸ್.ಕೋಶ ಯುವಜನಸೇವಾ ಇಲಾಖೆ ಕರ್ನಾಟಕ ಸರ್ಕಾರ ಬೆಂಗಳೂರು
3. ರಾ.ಸೇ.ಯೋ ಘಟಕ ಹೊಂದಿರುವ ಪ್ರಾಂಶುಪಾಲರು.
4. ಸಹಾಯಕ ನಿರ್ದೇಶಕರು ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು
5. ಕಛೇರಿ ಪ್ರತಿ: